ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾ.ಕ.ಹೊ/89/2015-16 ದಿನಾಂಕ:05-04-2016

| ಅರ್ಜಿದಾರರು | ತಕರಾರುದಾರರು |
|---|---|
| 1)ಸಾವಿತ್ರಮ್ಮ ಗಂಡ ಬಸವರಾಜ<br>2)ಸಾಂತಮ್ಮ ತಂದೆ ಲೇಟ್ ಕೋಡಿಹಳ್ಳಿ ಹನುಮಂತಪ್ಪ<br>ಕೆಂಚಮಲ್ಲನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಹನುಮಕ್ಕ ಗಂಡ ರಾಮಚಂದ್ರಪ್ಪ<br>ಬಿದಿರಿಕೇರಿ ಗ್ರಾಮ<br>ಜಗಳೂರು ತಾಲೂಕು<br>ದಾವಣಗೆರೆ ಜಿಲ್ಲಾ |
| ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 231/1. ವಿಸ್ತೀರ್ಣ 2-30 ಎಕ್ರೆ ಜಮೀನನ್ನು ಕ್ರಯ ಪತ್ರ ಪ್ರಕಾರ ಹಕ್ಕು ಬದಲಾವಣೆ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 231/1. ವಿಸ್ತೀರ್ಣ 2-30 ಎಕ್ರೆ ಜಮೀನನ್ನು ಸದರಿ ಗ್ರಾಮದ ಸಾಂತಮ್ಮ ತಂದೆ ಲೇಟ್ ಕೋಡಿಹಳ್ಳಿ ಹನುಮಂತಪ್ಪ ಇವರಿಂದ ಸದರಿ ಗ್ರಾಮದ ಸಾವಿತ್ರಮ್ಮ ಗಂಡ ಬಸವರಾಜ ಇವರು ದಿನಾಂಕ 24-08-2015 ರ ಡಾಕ್ಯುಮೆಂಟ್ ನಂಬರ್: 1632/2015-16 ರ ಪ್ರಕಾರ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆಂಚಮಲ್ಲನಹಳ್ಳಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ: 28-08-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಜಗಳೂರು ತಾಲೂಕು ಬಿದಿರಿಕೇರಿ ಗ್ರಾಮದ ಹನುಮಕ್ಕ ಗಂಡ ರಾಮಚಂದ್ರಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂ: 08/2015-16. ದಿನಾಂಕ: 24-09-2015 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 29-12-2015 ರಿಂದ 05-04-2016. ರ ವರೆಗೆ ವಿಚಾರಣೆ ಮಾಡಲಾಯಿತು

ವಿಚಾರಣೆಯ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ.ಮತ್ತು ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅರ್ಜಿದಾರರು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 231/1. ವಿಸ್ತೀರ್ಣ 2-30 ಎಕ್ರೆ ಜಮೀನನ್ನು ಸದರಿ ಗ್ರಾಮದ ಸಾಂತಮ್ಮ ತಂದೆ ಲೇಟ್ ಕೋಡಿಹಳ್ಳಿ ಹನುಮಂತಪ್ಪ ಇವರಿಂದ ದಿನಾಂಕ 24-08-2015 ರ ಡಾಕ್ಯುಮೆಂಟ್ ನಂಬರ್:1632/2015-16 ರ ಪ್ರಕಾರ ರೂ: 1.50.000/- ಗಳಿಗೆ ಖಂಡಿತ ಕ್ರಯಕ್ಕೆ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತೇನೆ. ಕಾರಣ ಸದರಿ ಕ್ರಯ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅವರು ತಮ್ಮ ತಕರಾರು ಬಗ್ಗೆ ಯಾವುದೇ ಹೇಳಿಕಗಳನ್ನಾಗಲಿ ದಾಖಲೆಗಳನ್ನಾಗಲಿ ಸಲ್ಲಿಸಿರುವುದಿಲ್ಲ ಇದರಿಂದ ಅವರಿಗೆ ಈ ಬಗ್ಗೆ ಆಸಕ್ತಿ ಇಲ್ಲವೆಂದು ಕಂಡು ಬರುತ್ತದೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಹೇಳಿಕೆಗಳನ್ನು ಕೇಳಿ ತಕರಾರುದಾರರು ವಿಚಾರಣೆಗೆ ಹಾಜರಾಗಿ ಯಾವುದೇ ಹೇಳಿಕೆಗಳನ್ನಾಗಲಿ. ದಾಖಲೆಗಳನ್ನಾಗಲಿ. ನೀಡಿಲ್ಲದ ಕಾರಣ ಅವರ ತಕರಾರು ಅರ್ಜಿಯನ್ನು ತಳ್ಳಿಹಾಕಿ ಕರ್ನಾಟಕ ಭೂಕಂದಾಯ ಕಾಯ್ದೇ 1964 ರ ಕಲಂ 128 ರ ಅಡಿಯಲ್ಲಿ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಸ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 231/1. ವಿಸ್ತೀರ್ಣ 2-30 ಎಕ್ರೆ ಜಮೀನನ್ನು ದಿನಾಂಕ 24-08-2015 ರ ಡಾಕ್ಯುಮೆಂಟ್ ನಂಬರ್: 1632/2015-16. ರ ಕ್ರಯ ದಸ್ತಾವೇಜು ಪ್ರಕಾರ ಅರ್ಜಿದಾರರಾದ ಹಾಗೂ ಕ್ರಯದಾರರಾದ ಸಾವಿತ್ರಮ್ಮ ಗಂಡ ಬಸವರಾಜ ಕೆಂಚಮಲ್ಲನಹಳ್ಳಿ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 05-04-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೂಡ್ಲಿಗಿ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಸಾವಿತ್ರಮ್ಮ ಗಂಡ ಬಸವರಾಜ. ಸಾಂತಮ್ಮ ತಂದೆ ಲೇಟ್ ಕೋಡಿಹಳ್ಳಿ ಹನುಮಂತಪ್ಪ. ಕೆಂಚಮಲ್ಲನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಹನುಮಕ್ಕ ಗಂಡ ರಾವಚಂದ್ರಪ್ಪ ಬಿದಿರಿಕೇರಿ ಗ್ರಾಮ ಜಗಳೂರು ತಾಲೂಕು ದಾವಣಗೆರೆ ಜಿಲ್ಲಾ ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕೆ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತತದೆ.

ಎ. ಬಸವರಾಜ

ಕ್ರ.ಸಂ.
ದಿನಾಂಕ 5/5/16